ಸಂ.ಕಂಇ 301 ಟಿಎನ್‌ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 07.07.2020

# ಆದೇಶ

1. ವಿಶ್ವ ಆರೋಗ್ಯ ಸಂಸ್ಥೆಯು ಕೋವಿಡ್–19ನ್ನು ಸಾಂಕ್ರಮಿಕ ರೋಗವೆಂದು ಘೋಷಿಸಿದೆ. ಕೋವಿಡ್–19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಕೇಂದ್ರ ಸರ್ಕಾರವು ಕಾಲ–ಕಾಲಕ್ಕೆ ಹಲವಾರು ನಿರ್ದೇಶನ / ಮಾರ್ಗಸೂಚಿಗಳನ್ನು ಹೊರಡಿಸುತ್ತಿದೆ. ಅದರನ್ವಯ ರಾಜ್ಯ ಸರ್ಕಾರವು ಈ ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಮಾರ್ಗಸೂಚಿಗಳನ್ನು ಹೊರಡಿಸಿದೆ.

2. ಕೋವಿಡ್–19 ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಈಗಾಗಲೇ ಹಿರಿಯ ಅಧಿಕಾರಿಗಳನ್ನು ಒಳಗೊಂಡಂತೆ ರಾಜ್ಯ ಮಟ್ಟದ ಹಾಗೂ ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಸೀಮಿತವಾಗಿ ಹಲವಾರು ಕಾರ್ಯ ತಂಡಗಳನ್ನು ರಚಿಸಿ ಆದೇಶಿಸಿದೆ.

3. ಕೋವಿಡ್–19 ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ರಾಜ್ಯದ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮಾನವ ಸಂಪನ್ಮೂಲಗಳನ್ನು ಅದರಲ್ಲೂ ಪ್ರಮುಖವಾಗಿ ವೈದ್ಯಕೀಯ, ಅರೆ ವೈದ್ಯಕೀಯ ಹಾಗೂ ಇತರ ಸಿಬ್ಬಂದಿಗಳನ್ನು ಒದಗಿಸುವುದು ಅತ್ಯಂತ ಪ್ರಮುಖವಾಗಿರುವುದನ್ನು ಸರ್ಕಾರವು ಗಮನಿಸಿದೆ.

4. ಈ ಹಿನ್ನೆಲೆಯಲ್ಲಿ, ವಿಪತ್ತು ನಿರ್ವಹಣಾ ಕಾಯ್ದೆ 2005ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಕೆಳಕಂಡ ರಾಜ್ಯ ಮಟ್ಟದ ಕಾರ್ಯಪಡೆ(Task Force)ಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರಚಿಸಿ ಆದೇಶಿಸಿದ್ದೇನೆ.

**ವೈದ್ಯಕೀಯ, ಅರೆ ವೈದ್ಯಕೀಯ ಹಾಗೂ ಇತರ ಮಾನವ ಸಂಪನ್ಮೂಲಗಳನ್ನು ಒದಗಿಸಲು ಕಾರ್ಯಪಡೆ**

| ಕ್ರ.ಸಂ | ಹೆಸರು ಮತ್ತು ಪದನಾಮ | ಸ್ಥಾನ |
|---|---|---|
| 1 | ಶ್ರೀಮತಿ ವಂದಿತಾ ಶರ್ಮಾ, ಭಾ.ಆ.ಸೇ.,<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು. | ಅಧ್ಯಕ್ಷರು |
| 2 | ಶ್ರೀ ರಾಜೀವ್ ಚಾವ್ಲಾ, ಭಾ.ಆ.ಸೇ.,<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,<br>ಸಿ.ಆ.ಸು.ಇ (ಇ–ಆಡಳಿತ). | ಸದಸ್ಯರು |
| 3 | ಶ್ರೀ ಜಾವೇದ್ ಅಖ್ತರ್, ಭಾ.ಆ.ಸೇ.,<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ. | ಸದಸ್ಯರು |
| 4 | ಶ್ರೀ ಎನ್. ಮಂಜುನಾಥ್ ಪ್ರಸಾದ್, ಭಾ.ಆ.ಸೇ.,<br>ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ). | ಸದಸ್ಯರು |
| 5 | ಶ್ರೀ ಟಿ.ಕೆ ಅನಿಲ್ ಕುಮಾರ್, ಭಾ.ಆ.ಸೇ.,<br>ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ). | ಸದಸ್ಯರು |
| 6 | ಶ್ರೀಮತಿ ಪಿ. ಹೇಮಲತಾ, ಭಾ.ಆ.ಸೇ.,<br>ಸರ್ಕಾರದ ಕಾರ್ಯದರ್ಶಿಗಳು,<br>ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. | ಸದಸ್ಯರು |

ಶಿವಿವಿ.

..2.

5. ಈ ರಾಜ್ಯ ಮಟ್ಟದ ಕಾರ್ಯಪಡೆ(Task Force)ಯು ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಕಾರ್ಯತಂಡಗಳಿಗೆ ಅವಶ್ಯವಾಗಿ ಬೇಕಾಗುವ ತುರ್ತು ವೈದ್ಯಕೀಯ, ಅರೆ ವೈದ್ಯಕೀಯ ಹಾಗೂ ಇತರ ಮಾನವ ಸಂಪನ್ಮೂಲಗಳನ್ನು ಒದಗಿಸುವ ಬಗ್ಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಮತ್ತು ಸೂಕ್ತ ಮೇಲ್ವಿಚಾರಣೆಯನ್ನು ನಡೆಸುವುದು.

(ಟಿ.ಎಂ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.